ಓಎಸ್. 64/2025 ಪಿಡಬ್ಲ್ಯೂ:1

ದಿನಾಂಕಃ 09.04.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಕೆ ಎಸ್ ಜಿ., ವಕೀಲರಿಂದಃ

ನಾನು ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಅಂಶಗಳು ಸರಿಯಾಗಿದ್ದು, ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರು ಮಾಡಿರುತ್ತೇನೆ.

ನನ್ನ ವಾದಕ್ಕೆ ಪೂರಕವಾಗಿ ದಿಃ09.12.2019 ರಂದು ಪ್ರತಿವಾದಿ ಬರೆದುಕೊಟ್ಟ ಅಡಮಾನ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿಃ1 ಎಂದೂ, ಅಗ್ರಿಮೆಂಟ್ ಕಂ ಹೈಪೋಥಿಕೇಷನ್ ಡೀಡನ್ನು ಹಾಜರುಪಡಿಸಿದ್ದು, ಅದನ್ನು ನಿಪಿಃ2 ಎಂದೂ, ದಿಃ12.12.2019 ರಂದು ಕೊಟ್ಟ ಪ್ರೋನೋಟನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ3 ಎಂದೂ, ಗ್ರಾರೆಂಟಿ ದಿಃ12.12.2019 ನ್ನು ಹಾಜರು ಪಡಿಸಿದ್ದು ಅದನ್ನು ನಿಪಿ 4 ಎಂದು, ಪ್ರತಿವಾದಿಯ ಬ್ಯಾಂಕಿನ ಖಾತೆ ವಹಿಪಟ್ಟಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿಃ 5 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಪ್ರಾರ್ಥನೆ.

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೇಳಿದ್ದು ಯಾವುದೇ ಸಕಾರ ಇಲ್ಲದೆ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಒ.,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಚಾಮರಾಜನಗರ.